# All India Radio: Bangalore
# Regional Bulletin In Kannada
# 04.03.2026 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯದಲ್ಲಿ ಇನ್ನೊಂದು ವರ್ಷದಲ್ಲಿ ೫ ಲಕ್ಷ ದರಖಾಸ್ತು ಪೋಡಿ ಮಾಡುವ ಗುರಿ - ಸಚಿವ ಕೃಷ್ಣ ಬೈರೇಗೌಡ

೨. ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನ ಕ್ಷೇತ್ರದ ಅಭಿವೃದ್ಧಿ ಕುರಿತಂತೆ ಕೈಗಾರಿಕೋದ್ಯಮಿಗಳೊಂದಿಗೆ ಕೇಂದ್ರ ಸಚಿವ ಕುಮಾರಸ್ವಾಮಿ ಸಭೆ

೩. ಮಾತುಕತೆ ಮೂಲಕ ವೈದ್ಯರ ಸಮಸ್ಯೆ ಇತ್ಯರ್ಥ ; ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭರವಸೆ

೪. ಗಂಗಾ ಕಲ್ಯಾಣ ಯೋಜನೆ ಅರ್ಜಿ ಪರಿಶೀಲಿಸಲು ಬೆಸ್ಕಾಂನಿಂದ ಪೋರ್ಟಲ್‌ನಲ್ಲಿ ಹೊಸ ಆಯ್ಕೆ

೫. ಜಲಜೀವನ್ ಮಿಷನ್ ಸ್ಟ್ಯಾಂಪ್ ಪೇಪರ್‌ಗಳಲ್ಲಿ ಅಕ್ರಮ ; ಸಿಬಿಐ ತನಿಖೆಗೆ ಬಿಜೆಪಿ ಆಗ್ರಹ

****************

ರಾಜ್ಯದಲ್ಲಿ ಕೈಗೊಂಡಿರುವ ಪೋಡಿ ಅಭಿಯಾನದಲ್ಲಿ ಈ ವರ್ಷದಲ್ಲಿ ೨ಲಕ್ಷದ ೬ ಸಾವಿರದ ದರಖಾಸ್ತು ಪೋಡಿ ಕೈಗೊಳ್ಳಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ಕಂದಾಯ ಇಲಾಖೆ ವತಿಯಿಂದ ನಡೆದ ಕಂದಾಯ ಸೇವೆಗಳ ಗ್ಯಾರಂಟಿ ಸಮರ್ಪಣಾ ಸಮಾವೇಶದ ಕಾರ್ಯಕ್ರಮದಲ್ಲಿ ಕಂದಾಯ ಸೇವೆಗಳ ದಾಖಲೆಗಳನ್ನು ವಿತರಿಸಿ ಮಾತನಾಡಿದ ಅವರು, ಇನ್ನೊಂದು ವರ್ಷದಲ್ಲಿ ೫ ಲಕ್ಷ ಪೋಡಿ ಮಾಡುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ.

ಪೌತಿ ಖಾತೆಗೆ ಹಿಂದೆ ನೀಡಲಾಗುತ್ತಿದ್ದ ೫ ದಾಖಲೆಗಳ ಬದಲಾಗಿ ಈಗ ೩ ದಾಖಲೆಗಳನ್ನು ನೀಡಬಹುದಾಗಿದ್ದು, ಜಿಲ್ಲಾಧಿಕಾರಿಗಳು ನಿರ್ಧರಿಸಿ ಖಾತೆ ಮಾಡಿಕೊಡಲಿದ್ದಾರೆ. ರಾಜ್ಯದಲ್ಲಿ ಪೌತಿ ಖಾತೆ ಅಭಿಯಾನ ನಡಯುತ್ತಿದ್ದು, ಈಗಾಗಲೇ ೧೩ಲಕ್ಷ ಪೌತಿ ಖಾತೆ ನೀಡಿದ್ದು, ಈ ವರ್ಷದೊಳಗೆ ೧೫ ಲಕ್ಷ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ಸರ್ವೆ ಇಲಾಖೆಗೆ ೧ ಸಾವಿರದ ೨೧೯ ಪರವಾನಗಿ ಹೊಂದಿರುವ ಸರ್ವೆಯರ್‌ಗಳನ್ನು ನೇಮಕ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಧ್ವನಿ : ಕೃಷ್ಣ ಬೈರೇಗೌಡ ( ಸೆಕೆಂಡ್‌ಗಳು)

ಕಾರ್ಯಕ್ರಮದಲ್ಲಿ ೩ ಸಾವಿರದ ೧೦೦ ದರಖಾಸ್ತು ಪೋಡಿ, ೧೦ ಸಾವಿರದ ೨೦೦ ಪೌತಿ ಖಾತೆ ಹಾಗೂ ೧ ಸಾವಿರದ ೭೦೦ ಸಾಮಾಜಿಕ ಭದ್ರತೆಯ ಅಭಿಯಾನದಡಿಯಲ್ಲಿ ಒಟ್ಟು ೧೫ ಸಾವಿರ ಕಂದಾಯ ಸೇವೆಗಳ ದಾಖಲೆಗಳನ್ನು ವಿತರಿಸಲಾಯಿತು.

****************

ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನ ಕ್ಷೇತ್ರದ ಅಭಿವೃದ್ಧಿ ಹಾಗೂ ಅದಕ್ಕೆ ಪೂರಕ ವ್ಯವಸ್ಥೆಯನ್ನು ಸೃಷ್ಟಿಸುವ ಹಿನ್ನೆಲೆಯಲ್ಲಿ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಇಂದು

ಕರ್ನಾಟಕ ಕೈಗಾರಿಕೆ ಮತ್ತು ವಾಣಿಜ್ಯ ಮಂಡಳಿ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕೈಗಾರಿಕೋದ್ಯಮಿಗಳ ಜತೆ ಮಹತ್ವದ ಸಭೆ ನಡೆಸಿದರು.

ಬೆಂಗಳೂರಿನ ಹೆಚ್ ಎಂಟಿ ಭವನದಲ್ಲಿರುವ ಸಚಿವರ ಕಚೇರಿಯಲ್ಲಿ ನಡೆದ ಈ ಸಭೆಯಲ್ಲಿ ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನ ಕ್ಷೇತ್ರದ ವಿಸ್ತರಣೆಗೆ ಇರುವ ವಿಪುಲ ಅವಕಾಶಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿದರು. ಮಂಡ್ಯ ಜಿಲ್ಲೆಯಲ್ಲಿ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಜಾಗತಿಕ ಮಟ್ಟದ ಪರೀಕ್ಷಾ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ ನಿರ್ಧಾರ ಕೈಗೊಂಡ ಹಿನ್ನೆಲೆಯಲ್ಲಿ ಕುಮಾರಸ್ವಾಮಿ ಅವರನ್ನು ಕೈಗಾರಿಕೋದ್ಯಮಿಗಳು ಅಭಿನಂದಿಸಿದರು.

ಇಂತಹ ಕೇಂದ್ರವೊಂದು ರಾಜ್ಯಕ್ಕೆ ಅಗತ್ಯವಿದ್ದು, ವಾಹನೋದ್ಯಮಕ್ಕೆ ದೊಡ್ಡ ಶಕ್ತಿ ನೀಡಲಿದೆ. ಮುಖ್ಯವಾಗಿ ಇವಿ ಉದ್ಯಮಕ್ಕೆ ದೊಡ್ಡ ಪ್ರಮಾಣದಲ್ಲಿ ಉತ್ತೇಜನ ನೀಡಲಿದೆ ಎಂದು ತಿಳಿಸಿದರು.

ಇದೇ ವೇಳೆ ಮಾತನಾಡಿದ ಕುಮಾರಸ್ವಾಮಿ, ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನ ಕ್ಷೇತ್ರದ ಅಭಿವೃದ್ಧಿಗೆ ಸಂಶೋಧನೆ, ಉತ್ಪಾದನೆ ಹಾಗೂ ಉದ್ಯೋಗ ಸೃಷ್ಟಿಗೆ ಒತ್ತು ನೀಡಲಾಗುವುದು. ಸಾರಿಗೆ ಕ್ಷೇತ್ರದಲ್ಲಿ ಇಂಗಾಲ ಹೊರಸೂಸುವಿಕೆಯನ್ನು ಶೂನ್ಯಮಟ್ಟಕ್ಕೆ ಇಳಿಸಿ ಪರಿಸರ ಪೂರಕ ಸಾರಿಗೆ ವ್ಯವಸ್ಥೆ ರೂಪಿಸುವ ದೃಢ ಸಂಕಲ್ಪವನ್ನು ಪ್ರಧಾನಿ ಕೈಗೊಂಡಿದ್ದಾರೆ ಎಂದು ಹೇಳಿದರು.

****************

ವೈದ್ಯಾಧಿಕಾರಿಗಳೊಂದಿಗೆ ಮಾತುಕತೆ ನಡೆಸುವ ಮೂಲಕ ಸಮಸ್ಯೆ ಇತ್ಯರ್ಥಪಡಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ರಾಜ್ಯದಲ್ಲಿ ವೈದ್ಯಾಧಿಕಾರಿಗಳು ಮುಷ್ಕರ ನಡೆಸಲು ನಿರ್ಧರಿಸುವ ಕುರಿತ ಪ್ರಶ್ನೆಗೆ ಮಂಗಳೂರಿನಲ್ಲಿಂದು ಪ್ರತಿಕ್ರಿಯಿಸಿದ ಅವರು, ಆರೋಗ್ಯ ಸೇವೆ ಜನರಿಗೆ ಅತ್ಯಂತ ಅಗತ್ಯ ಸೇವೆಯಾಗಿದ್ದು, ಇದನ್ನು ಸ್ಥಗಿತಗೊಳಿಸುತ್ತೇವೆ ಎಂದು ಹೇಳುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈಗಾಗಲೇ ವೈದ್ಯರ ಬಹುತೇಕ ಬೇಡಿಕೆಗಳನ್ನು ಸರ್ಕಾರ ಈಡೇರಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ಗಂಗಾ ಕಲ್ಯಾಣ ಯೋಜನೆ ಕುರಿತ ಅರ್ಜಿಯ ಸ್ಥಿತಿಯನ್ನು ರೈತರು ಆನ್‌ಲೈನ್‌ನಲ್ಲಿ ಟ್ರ್ಯಾಕ್ ಮಾಡಲು ಗಂಗಾ ಕಲ್ಯಾಣ ಪೋರ್ಟಲ್‌ನಲ್ಲಿ ಬೆಸ್ಕಾಂನಿಂದ ಹೊಸ ಆಯ್ಕೆ ಕಲ್ಪಿಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಪೋರ್ಟಲ್‌ನ ಹೊಸ ಆಯ್ಕೆಯನ್ನು ಅನಾವರಣಗೊಳಿಸಿದ ಅವರು, "ಯೋಜನೆಯಲ್ಲಿ ಪಾರದರ್ಶಕತೆ, ಸಾರ್ವಜನಿಕರಿಗೆ ಸುಲಭ ಮಾಹಿತಿ ಒದಗಿಸಲು ಈ ಹೊಸ ಆಯ್ಕೆಯನ್ನು ಪರಿಚಯಿಸಲಾಗಿದೆ," ಎಂದು ಹೇಳಿದ್ದಾರೆ.

ಕೊಳವೆ ಬಾವಿ ಕೊರೆದ ನಂತರ ವಿದ್ಯುತ್ ಮೂಲಸೌಕರ್ಯ ಕಲ್ಪಿಸುವ ಸಂದರ್ಭದಲ್ಲಿ ಅರ್ಜಿ ಯಾವ ಹಂತದಲ್ಲಿದೆ ಎಂದು ತಿಳಿಯಲು ರೈತರು ಈ ಸೇವೆಯ ಸದುಪಯೋಗ ಪಡೆಯಬೇಕು ಎಂದು ತಿಳಿಸಿದ್ದಾರೆ.

ಈ ವೈಶಿಷ್ಟ್ಯವು ಗಂಗಾ ಕಲ್ಯಾಣ ಯೋಜನೆಯ ಪೋರ್ಟಲ್‌ನಲ್ಲಿ ಲಭ್ಯವಿದ್ದು, ಮುಖಪುಟದಲ್ಲಿ ಒದಗಿಸಲಾದ 'ಟ್ರ್ಯಾಕ್ ಅಪ್ಲಿಕೇಶನ್' ಆಯ್ಕೆಯನ್ನು ಕ್ಲಿಕ್ ಮಾಡಿ ಪೂರಕ ವಿವರ ದಾಖಲಿಸಿದರೆ, ಫಲಾನುಭವಿಗಳು ತಮ್ಮ ಅರ್ಜಿಯ ಮಾಹಿತಿ ಪಡೆಯಬಹುದಾಗಿದೆ.

****************

ಬೆಂಗಳೂರು ದಕ್ಷಿಣ ಜಿಲ್ಲೆಯ ಕೆರೆಗಳನ್ನು ತುಂಬಿಸುವ ಕಾರ್ಯ ಸರ್ಕಾರ ಸಮಾರೋಪಾದಿಯಲ್ಲಿ ನಿರ್ವಹಿಸುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ರಾಮನಗರದಲ್ಲಿಂದು ವೈ.ಜಿ.ಗುಡ್ಡ ಏತನೀರಾವರಿ ಯೋಜನೆ, ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾಗಡಿ ಜನರಿಗೆ ಕಾವೇರಿ, ಹೇಮಾವತಿ, ಎತ್ತಿನಹೊಳೆಯಿಂದಲೂ ನೀರು ಬರುತ್ತಿದೆ. ಮಾಗಡಿ ಕೆರೆ ತುಂಬಿಸಲು ಸತ್ತೇಗಾಲದಿಂದಲೂ ನೀರು ಹರಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರ ಬಂದ ಬಳಿಕ, ಈ ಭಾಗದ ಜನರ ಆಸ್ತಿ ಮೌಲ್ಯ ಹೆಚ್ಚಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

****************

ಜಲಜೀವನ್ ಮಿಷನ್ ಸ್ಟ್ಯಾಂಪ್ ಪೇಪರ್ ವಿಚಾರದಲ್ಲಿ ಕ್ರಿಮಿನಲ್ ಚಟುವಟಿಕೆ ನಡೆದಿದ್ದು, ಸರಕಾರ ಸಿಬಿಐ ತನಿಖೆ ನಡೆಸಬೇಕೆಂದು ಮಾಜಿ ಸಚಿವ ಡಿ.ಎನ್.ಜೀವರಾಜ್ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೃಂಗೇರಿ ಕ್ಷೇತ್ರದಲ್ಲಿ ಜಲಜೀವನ್ ಮಿಷನ್ ಎಂಬುದು ಜಲಜೀವನ್ ಕಮಿಷನ್ ಆಗಿದೆ ಎಂದು ದಾಖಲೆಗಳ ಜೊತೆ ಆರೋಪಿಸಿದ್ದಾರೆ. ೧೫೦ ಕೋಟಿ ರೂಪಾಯಿಗಿಂತ ಹೆಚ್ಚು ಹಣವನ್ನು ಕೇಂದ್ರ ಸರ್ಕಾರ ಕೊಟ್ಟಿದೆ. ಆದರೆ, ಒಂದೇ ಒಂದು ಮನೆಗೆ ನೀರು ಲಭಿಸಿಲ್ಲ ಎಂದು ದೂರಿದ್ದಾರೆ.

****************

ಪಶ್ಚಿಮ ಏಷ್ಯಾ ಮತ್ತು ಕೊಲ್ಲಿ ರಾಷ್ಟ್ರದಲ್ಲಿ ಉಂಟಾಗಿರುವ ಸಂಘರ್ಷದ ಹಿನ್ನೆಲೆಯಲ್ಲಿ ಭಾರತದ ವಿದೇಶಾಂಗ ವ್ಯವಹಾರ ಸಚಿವಾಲಯ ನಿಯಂತ್ರಣ ಕೊಠಡಿ ಸ್ಥಾಪಿಸಿದೆ. ಸಹಾಯವಾಣಿ ಸಂಖ್ಯೆ ೧೮೦೦೧೧೮೭೯೭, ೦೧೧-೨೩೦೧ ೨೧೧೩, ೦೧೧-೨೩೦೧ ೪೧೦೪ ಮತ್ತು ೦೧೧-೨೩೦೧ ೭೯೦೫ ದೂರವಾಣಿ ಸಂಖ್ಯೆಗಳನ್ನು  ಬೆಳಗ್ಗೆ ೯ ರಿಂದ ಸಂಜೆ ೯ರವರೆಗೆ ಸಂಪರ್ಕಿಸಬಹುದಾಗಿದೆ.

ಇದಲ್ಲದೇ, ಸಂಘರ್ಷ ಪೀಡಿತ ವಲಯಗಳಲ್ಲಿ ಸುರಕ್ಷತೆ ಮತ್ತು ತೆರವು ಸಾಧ್ಯತೆಗಳಿಗಾಗಿ ದಿನವಿಡಿ ಕಾರ್ಯನಿರ್ವಹಿಸುವ ತುರ್ತು ಸಹಾಯವಾಣಿಗಳನ್ನು ಸ್ಥಾಪಿಸಲಾಗಿದೆ.

****************

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಕುರ್ಚಿ ಕದನದ ಮುಂದಿವರಿದ ಭಾಗವೇ ಫೋನ್ ಕದ್ದಾಲಿಕೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಈ ಕುರಿತಂತೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಅಸಮಧಾನ ವ್ಯಕ್ತಪಡಿಸಿದ್ದಾರೆ. ಪ್ರಜಾಪ್ರಭುತ್ವ ಎಂದರೆ ಶಾಸಕರು ಗುಂಪುಗಾರಿಕೆ ನಡೆಸುವುದಲ್ಲ ಎಂದು ತಿರುಗೇಟು ನೀಡಿದ್ದಾರೆ.

****************

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ನಾಳೆ ವಿವಿಧ ಕಚೇರಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಬಳಿಕ ಸಾರ್ವಜನಿಕ ಸಂಪರ್ಕ ಸಭೆ ನಡೆಸಿ ನಾಗರಿಕರ ಅಹವಾಲುಗಳನ್ನು ಖುದ್ದಾಗಿ ಆಲಿಸಲಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುವ ಬೆಂಗಳೂರು ಕೇಂದ್ರ ನಗರ ಪಾಲಿಕೆ ಹಾಗೂ ಪೂರ್ವ ನಗರ ಪಾಲಿಕೆಗಳಲ್ಲಿ ಈಗಾಗಲೇ ಸಾರ್ವಜನಿಕ ಸಂಪರ್ಕ ಸಭೆ ನಡೆಸಲಾಗಿದ್ದು, ನಾಗರೀಕರಿಂದ ಸಕಾರಾತ್ಮಕ ಸ್ಪಂದನೆ ದೊರೆತಿದೆ.

ಇದೇ ೧೦ ರಂದು ಉತ್ತರ ನಗರ ಪಾಲಿಕೆ ಹಾಗೂ ೧೨ ರಂದು ದಕ್ಷಿಣ ನಗರ ಪಾಲಿಕೆಗಳಲ್ಲಿ ಸಾರ್ವಜನಿಕರ ಅಹವಾಲುಗಳು ಮತ್ತು ಮನವಿಗಳನ್ನು ಸ್ವೀಕರಿಸಿ ಸ್ಥಳೀಯ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲು ನಿರ್ಧರಿಸಿದ್ದಾರೆ.

****************

ಕೊಲಂಬೊದಲ್ಲಿ ನಡೆಯಲಿರುವ ಐಟಿಎಫ್ ಏಷ್ಯಾ ಅಂಡರ್-೧೯ ಡೆವಲ್ಪಮೆಂಟ್ ಚಾಂಪಿಯನ್‌ಶಿಪ್ ಫೈನಲ್‌ಗೆ ರಾಜ್ಯದ ಮೂವರು ಆಟಗಾರರು ಆಯ್ಕೆಯಾಗಿದ್ದಾರೆ. ಭಾರತ ತಂಡದ ನಾಲ್ವರು ಆಟಗಾರರಲ್ಲಿ ರಾಜ್ಯದ ಸೃಷ್ಟಿಕಿರಣ್, ಪದ್ಮಪ್ರಿಯ ರಮೇಶ್ ಕುಮಾರ್, ಬಾಲಕಿಯರ ವಿಭಾಗದಲ್ಲಿ ಸ್ಪರ್ಧಿಸಲಿದ್ದು, ಪುನೀತ್ ಮನೋಹರ್ ಹಾಗೂ ಪಂಜಾಬ್ ತಾನೀಶ್ ನಂದಾ ಅವರನ್ನು ಆಯ್ಕೆ ಮಾಡಲಾಗಿದೆ.

****************

ಸಂಕ್ಷಿಪ್ತ ಸುದ್ದಿಗಳು

೧. ಮಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೨. ಬೆಂಗಳೂರಿನ 'ನಾಯಂಡಹಳ್ಳಿ ಜಂಕ್ಷನ್ ಸಮಗ್ರ ಅಭಿವೃದ್ಧಿ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿ, ಸಂಚಾರ ದಟ್ಟಣೆ ನಿವಾರಣೆಗಾಗಿ ಸರ್ವಿಸ್ ರಸ್ತೆಗಳ ಕಾಮಗಾರಿಗಳನ್ನು ವೈಜ್ಞಾನಿಕವಾಗಿ ಬಗೆಹರಿಸಿ ಎಂದು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೩. ಕೋಲಾರದ ಮಾಲೂರಿನಲ್ಲಿ ತಾಲೂಕು ಆಡಳಿತದ ನಡೆ ಗ್ರಾಮದ ಕಡೆ ಕಾರ್ಯಕ್ರಮವು ಕಳೆದ ಎರಡು ತಿಂಗಳಿನಿಂದ ಯಶಸ್ವಿಯಾಗಿ ನಡೆದಿದ್ದು, ಒಟ್ಟು ೩ ಸಾವಿರದ ೯೦೦ ಸಮಸ್ಯೆಗಳನ್ನು ಇತ್ಯರ್ಥ ಮಾಡಲಾಗಿದೆ. ಉಳಿದ ೧ ಸಾವಿರದ ೬೯೬ ಅರ್ಜಿಗಳು ಕಾನೂನಿನ ಚೌಕಟ್ಟಿನಲ್ಲಿ ಪರಿಹಾರ ಮಾಡಲಾಗುವುದು ಎಂದು ಶಾಸಕ ನಂಜೇಗೌಡ ತಿಳಿಸಿದ್ದಾರೆ.

೪. ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ವಿದ್ಯುತ್ ದರ ತಿದ್ದುಪಡಿ ಮಾಡಿರುವ ಆದೇಶದ ವಿರುದ್ಧ ಎಫ್‌ಕೆಸಿಸಿಐ ಅಸಮಾಧಾನ ವ್ಯಕ್ತಪಡಿಸಿದೆ. ಕೃಷಿ ವಲಯವನ್ನು ರಕ್ಷಿಸುವುದರ ಜೊತೆಗೆ ಕೈಗಾರಿಕೆಗಳ ಮೇಲೆ ಅತಿಯಾದ ಭಾರ ಹಾಕದೇ ಸಮತೋಲನಾ ಕಾಯ್ದುಕೊಳ್ಳುವಂತೆ ಆಗ್ರಹಿಸಿದೆ.

********ಮುಕ್ತಾಯ********